ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 1/2/2020

# ಸಿಎಎಯಿಂದ ಗಾಂಧಿ ಕನಸು ನನಸು

## ಜಂಟಿ ಅಧಿವೇಶನದಲ್ಲಿ ರಾಷ್ಟ್ರಪತಿ ಕೋವಿಂದ್ ಬಣ್ಣನೆ । ಪ್ರತಿಪಕ್ಷಗಳ ಅಸಮಾಧಾನ

**ಹೊಸದಿಲ್ಲಿ:** ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಶುಕ್ರವಾರ ಸಂಸತ್ತಿನ ಜಂಟಿ ಅಧಿವೇಶನ ಉದ್ದೇಶಿಸಿ ಮಾಡಿದ ಭಾಷಣದಲ್ಲಿ ವಿವಾದಿತ ಪೌರತ್ವ ತಿದ್ದುಪಡಿ ಕಾಯಿದೆಯನ್ನು (ಸಿಎಎ) ಬೆಂಬಲಿಸಿದ್ದು, ದೇಶಾದ್ಯಂತ ಪ್ರತಿಭಟನೆ ಹೆಸರಲ್ಲಿ ನಡೆಯುತ್ತಿರುವ ಹಿಂಸಾಚಾರದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಸಂಸತ್ತಿನ ಸೆಂಟ್ರಲ್ ಹಾಲ್‌ನಲ್ಲಿ ಜಂಟಿ ಅಧಿವೇಶನ ಉದ್ದೇಶಿಸಿ ಮಾತ ನಾಡಿದ ಅವರು, ರಾಷ್ಟ್ರಪಿತ ಮಹಾತ್ಮಾ ಗಾಂಧಿ ಅವರ ಕನಸುಗಳನ್ನು ಪೌರತ್ವ ತಿದ್ದುಪಡಿ ಕಾಯಿದೆ ನನಸು ಮಾಡಿದೆ ಎಂದು ಬಣ್ಣಿಸಿದ್ದಾರೆ.

''ಪಾಕ್, ಬಾಂಗ್ಲಾದೇಶದಿಂದ (ಈಶಾನ್ಯ ಪಾಕಿಸ್ತಾನ) ಭಾರತಕ್ಕೆ ವಲಸೆ ಬರುವ ಹಿಂದೂ, ಸಿಖ್, ಬೌದ್ಧರು, ಜೈನರು ಮತ್ತು ಇತರೆ ಧಾರ್ಮಿಕ ಅಲ್ಪಸಂಖ್ಯಾತರಿಗೆ ಇಲ್ಲಿನ ಪೌರತ್ವ ನೀಡಬೇಕೆಂದು ಭಾರತ-ಪಾಕಿಸ್ತಾನ ವಿಭಜನೆಯ ಬಳಿಕ ಗಾಂಧಿ ಹೇಳಿದ್ದರು. ರಾಷ್ಟ್ರ ಪಿತನ ಆಶೋತ್ತರಗಳನ್ನು ನಾವು ಗೌರವಿಸಿ ಈಡೇರಿಸಬೇಕು. ಈ ನಿಟ್ಟಿನಲ್ಲಿ ಸಂಸತ್ತಿನ ಉಭಯ ಸದನಗಳು ಪೌರತ್ವ ತಿದ್ದುಪಡಿ ವಿಧೇಯಕವನ್ನು ಅನುಮೋದಿಸಿರುವುದು ನನಗೆ ಸಂತಸ ತಂದಿವೆ,'' ಎಂದು ರಾಷ್ಟ್ರಪತಿ ಹೇಳಿದರು.

ಇದೇ ವೇಳೆ, ಹಿಂಸಾಚಾರವು ದೇಶವನ್ನು ದುರ್ಬಲಗೊಳಿಸುತ್ತದೆ ಎಂದು ಹೇಳುವ ಮೂಲಕ ಸಿಎಎ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಗಳ ಬಗ್ಗೆ ಅಸಮಾಧಾನ ಹೊರಹಾಕಿದರು. ಅಯೋಧ್ಯೆ ತೀರ್ಪು, ತ್ರಿವಳಿ ತಲಾಕ್ ರದ್ದು, ಜಮ್ಮು-ಕಾಶ್ಮೀರಕ್ಕೆ ನೀಡಿದ ವಿಶೇಷ ಸ್ಥಾನಮಾನ ರದ್ದು, ನವಭಾರತ ನಿರ್ಮಾಣ, ಆರ್ಥಿಕ ಅಭಿವೃದ್ಧಿ ಸೇರಿದಂತೆ ಹತ್ತು ಹಲವು ವಿಷಯಗಳನ್ನು ಭಾಷಣದಲ್ಲಿ ಅವರು ಪ್ರಸ್ತಾಪಿಸಿದರು.

### ಸದನದಲ್ಲಿ ಗದ್ದಲ

ರಾಷ್ಟ್ರಪತಿಗಳು ಸಿಎಎ ಬೆಂಬಲಿಸಿ ಹೇಳಿಕೆ ನೀಡುತ್ತಿದ್ದಂತೆಯೇ ಬಿಜೆಪಿ ಸದಸ್ಯರ ಚಪ್ಪಾಳೆ ಸದ್ದು ಮಾರ್ದನಿಸಿತು. ಕೆಲವು ಸದಸ್ಯರು ಮೇಜು ಕುಟ್ಟಿ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಮಧ್ಯೆ, ಪ್ರತಿಪಕ್ಷ ಸದಸ್ಯರು 'ಶೇಮ್' ಎಂದು ಕೂಗುವ ಮೂಲಕ ರಾಷ್ಟ್ರಪತಿಗಳ ಭಾಷಣದ ಬಗ್ಗೆ ಪ್ರತಿರೋಧ ವ್ಯಕ್ತಪಡಿಸಿದರು. ಈ ಗದ್ದಲದಿಂದಾಗಿ ರಾಷ್ಟ್ರಪತಿಗಳು ಕೆಲಕಾಲ ಭಾಷಣ ನಿಲ್ಲಿಸಿ, ಬಳಿಕ ಮುಂದುವರಿಸಿದರು.

### ರಾಷ್ಟ್ರಪತಿ ಭಾಷಣದ ಮುಖ್ಯಾಂಶ

- ಪರಸ್ಪರ ಚರ್ಚೆ, ಸಂವಾದ, ಮಾತುಕತೆಗಳು ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಸರಕಾರ ನಂಬಿದೆ.
- ಜಾಗತಿಕ ಮಟ್ಟದಲ್ಲಿ ಭಾರತದ ಸ್ಥಾನಮಾನವನ್ನು ಹೆಚ್ಚಿಸುವ ಅನೇಕ ಸುಧಾರಣಾ ಕ್ರಮಗಳನ್ನು ಸರಕಾರ ಜಾರಿಗೊಳಿಸಿದೆ.
- ಈ ದಶಕದಲ್ಲಿ ಮತ್ತು ಅದರಿಂದಾಚೆಗೂ ನಮಗೆಲ್ಲರಿಗೂ ಭಾರತದ ಸಂವಿಧಾನ ದಾರಿದೀಪವಾಗಿದೆ.
- ಇದು ನವಭಾರತ ನಿರ್ಮಾಣಕ್ಕೆ ಜನತೆ ತೀರ್ಪು ನೀಡಿ ಆರಿಸಿದ ಸರಕಾರ. ಆ ಗುರಿಯನ್ನು ಸಾಧಿಸುವುದರತ್ತ ಸರಕಾರ ಕೆಲಸ ಮಾಡುತ್ತಿದೆ.
- ಸರಕಾರ ಜಾರಿಗೊಳಿಸಿರುವ ಎಲ್ಲಾ ಉಪಕ್ರಮಗಳು ಮತ್ತು ಯೋಜನೆಗಳು ಈ ದೇಶದ ಬಡವರು, ನಿರ್ಗತಿಕರು, ಮಧ್ಯಮ ವರ್ಗದವರಿಗೆ ಅನುಕೂಲವಾಗಿದ್ದು ಇಲ್ಲಿ ಜಾತಿ, ಧರ್ಮ ಎಂದು ತಾರತಮ್ಯ ಇರುವುದಿಲ್ಲ.